## ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1545 |
| ವಿಧಾನ ಪರಿಷತ್ ಸದಸ್ಯರ ಹೆಸರು | : | ಶ್ರೀ ಕೆ.ಎ ತಿಪ್ಪೇಸ್ವಾಮಿ |
| ಉತ್ತರಿಸುವ ದಿನಾಂಕ | : | 11-03-2022 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗದವರಿಗೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಗೆ ತರಬೇತಿ ಹೊಂದಲು ಕೇಂದ್ರ ಸರ್ಕಾರದ ಪುರಸ್ಕೃತ ಯೋಜನೆ ಜಾರಿಯಲ್ಲಿದೆಯೇ; (ಹಾಗಿದ್ದಲ್ಲಿ, ವಿವರ ನೀಡುವುದು) | ಸಮಾಜ ಕಲ್ಯಾಣ ಇಲಾಖೆಯವತಿಯಿಂದ ಪರೀಕ್ಷಾ ಪೂರ್ವ ತರಬೇತಿ ಕೇಂದ್ರದ ಮೂಲಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ಯು.ಪಿ.ಎಸ್.ಸಿ / ಕೆ.ಎ.ಎಸ್ / ಗ್ರೂಪ್-ಸಿ / ಬ್ಯಾಂಕಿಂಗ್ / ಆರ್.ಆರ್.ಬಿ ಮತ್ತು ಎಸ್.ಎಸ್.ಸಿ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪೂರ್ವಭಾವಿ ತರಬೇತಿ ನೀಡುವ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಸದರಿ ಕಾರ್ಯಕ್ರಮಕ್ಕೆ ಪ್ರತಿ ವರ್ಷ ರಾಜ್ಯ ವಲಯದಡಿ ಮಾತ್ರ ಅನುದಾನ ಒದಗಿಸಲಾಗುತ್ತಿದೆ. ಕೇಂದ್ರ ಸರ್ಕಾರದಿಂದ ಯಾವುದೇ ಅನುದಾನ ಒದಗಿಸಲಾಗುತ್ತಿಲ್ಲ.<br><br>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯವತಿಯಿಂದ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ಹೊಂದಲು ಕೇಂದ್ರ ಸರ್ಕಾರದ ಪುರಸ್ಕೃತ ಯೋಜನೆ ಜಾರಿಯಲ್ಲಿರುವುದಿಲ್ಲ. |
| ಆ) | ಈ ಯೋಜನೆ ಅಡಿ ಕಳೆದ 3 ವರ್ಷಧಲ್ಲಿ ಮೇಲಿನ ವರ್ಗದ ಅಭ್ಯರ್ಥಿಗಳು ತರಬೇತಿ ಪಡೆದು ಉತ್ತೀರ್ಣಗೊಂಡವರ ಸಂಖ್ಯೆ ಎಷ್ಟು; (ಪೂರ್ಣ ವಿವರ ನೀಡುವುದು) | ಕೇಂದ್ರ ಪುರಷ್ಕೃತ ಯೋಜನೆಯ ಅನುದಾನದಿಂದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡುವ ಕಾರ್ಯಕ್ರಮ ರಾಜ್ಯದಲ್ಲಿ ಅನುಷ್ಠಾನಗೊಳಿಸುತ್ತಿಲ್ಲ. |
| ಇ) | ಈ ಯೋಜನೆ ಅಡಿ ಕೇಂದ್ರ ಸರ್ಕಾರ ರಾಜ್ಯ ಸರ್ಕಾರಕ್ಕೆ ಕಳೆದ ಮೂರು ವರ್ಷಗಳಲ್ಲಿ ನೀಡಿರುವ ಅನುದಾನ ಮತ್ತು ಬಳಕೆ ಎಷ್ಟು? (ವಿವರಗಳನ್ನು ನೀಡುವುದು) | ಕೇಂದ್ರ ಸರ್ಕಾರದಿಂದ ಸದರಿ ಯೋಜನೆಗಳಿಗೆ ಯಾವುದೇ ಅನುದಾನ ಒದಗಿಸಿರುವುದಿಲ್ಲ. |

ಸಕಇ 208 ಪಕವಿ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.